## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 493

ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಬಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 22.12.2022.

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ (State Seniority List) ಇದುವರೆಗೂ ತಯಾರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಪಟ್ಟಿಯನ್ನು ತಯಾರಿಸದಿರಲು ಕಾರಣಗಳೇನು; (ವಿವರ ನೀಡುವುದು) | ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 374 ಗ್ರಾಪಂಕಾ 2013, ದಿನಾಂಕ:21-02-2014 ರಲ್ಲಿ ದಿನಾಂಕ:31-12-2011 ರಲ್ಲಿದ್ದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು.<br><br>ಈ ಜೇಷ್ಠತಾ ಪಟ್ಟಿಯನ್ನು ಪ್ರಶ್ನಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮಾನ್ಯ ಕರ್ನಾಟಕ ರಾಜ್ಯ ಆಡಳಿತ ಮಂಡಳಿಯು ಅರ್ಜಿ ಸಂಖ್ಯೆ: 2782 ರಿಂದ 2792 / 2014 ಮತ್ತು ಇತರೆ ಅರ್ಜಿಗಳನ್ನು ದಾಖಲಿಸಿದ್ದರು. ಮಾನ್ಯ ನ್ಯಾಯ ಮಂಡಳಿಯು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ರದ್ದುಗೊಳಿಸಿ ದಿನಾಂಕ: 18.03.2019 ರಲ್ಲಿ ಆದೇಶಿಸಿದೆ.<br><br>ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶವನ್ನು ಪ್ರಶ್ನಿಸಿ ಬಾಧಿತರು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಮತ್ತು ಕಲಬುರಗಿ ಪೀಠಗಳಲ್ಲಿ ರಿಟ್ ಅರ್ಜಿ ಸಂಖ್ಯೆ: 26196/2019, 201903/2019, ಸಲ್ಲಿಸಿದ್ದು ಸರ್ಕಾರವು ಸಹ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ 33613/2019 ಸಲ್ಲಿಸಿರುತ್ತದೆ.<br><br>ಮಾನ್ಯ ಉಚ್ಚ ನ್ಯಾಯಾಲಯವು ಪ್ರಸ್ತುತ ಎಲ್ಲಾ ಪ್ರಕರಣಗಳನ್ನು ಒಟ್ಟುಗೂಡಿಸಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ವಿಚಾರಣೆ ನಡೆಯುತ್ತಿದ್ದು ಪ್ರಕರಣ ಬಾಕಿಯಲ್ಲಿರುತ್ತದೆ. ಮಾನ್ಯ ನ್ಯಾಯಾಲಯವು ಅಂತಿಮವಾಗಿ ನೀಡುವ ಆದೇಶವನ್ನು ಅನುಸರಿಸಿ ಅದರಂತೆ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ತಯಾರಿಸಲು ಕ್ರಮ ವಹಿಸಲಾಗುವುದು. |
| (ಆ) | ಪಿ.ಡಿ.ಓ ಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಯಾವ ಮಾನದಂಡಗಳ ಆಧಾರದ ಮೇಲೆ ತಯಾರಿಸಲಾಗಿದೆ; (ಈ ಕುರಿತು ವಿವರ ನೀಡುವುದು) | 2010 ರಲ್ಲಿ ರಾಜ್ಯದ ಪಂಚಾಯತಿ ಅಧಿಕಾರಿ ಹುದ್ದೆಯ ನೇಮಕಾತಿಗಾಗಿ ಪ್ರಕಟಿಸಲಾಗಿದ್ದ ಅಭ್ಯರ್ಥಿಗಳ ಆಯ್ಕೆ ಪಟ್ಟಿ ಮತ್ತು ಮೀಸಲಾತಿ ನಿಯಮಗಳ ವಿರುದ್ಧ ಹಾಗೂ ಆಯ್ಕೆ ಪ್ರಾಧಿಕಾರವು ಪ್ರಕಟಿಸಿದ್ದ ಕೀ ಉತ್ತರಗಳ ವಿರುದ್ಧ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಕೆಲವು ಅಭ್ಯರ್ಥಿಗಳು ಅರ್ಜಿ ದಾಖಲಿಸಿದ್ದರು.<br><br>ಈ ಮಧ್ಯೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶದಿಂದಾಗಿ ದಿನಾಂಕ:10-03-2010, 12-04-2010, 13-04-2010 ಮತ್ತು ದಿನಾಂಕ:21-07-2010 ರಂದು ವಿವಿಧ ಜಿಲ್ಲೆಗಳಲ್ಲಿ ಅಂತಿಮ ಆಯ್ಕೆ ಪಟ್ಟಿಗಳನ್ನು ಆಯ್ಕೆ ಪ್ರಾಧಿಕಾರವು ಬಿಡುಗಡೆಗೊಳಿಸಿರುತ್ತದೆ. ಆಯ್ಕೆ ಪ್ರಾಧಿಕಾರವು ಎಲ್ಲಾ ಜಿಲ್ಲೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಒಂದೇ ದಿನಾಂಕದಂದು ಬಿಡುಗಡೆಗೊಳಿಸಿದ್ದರೆ ಎಲ್ಲಾ ಜಿಲ್ಲೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಒಂದೇ ದಿನದಂದು ಕರ್ತವ್ಯಕ್ಕೆ ಹಾಜರಾಗುವುದು ಸಾಧ್ಯವಿರುತ್ತಿತ್ತು.<br><br>ಆದುದರಿಂದ ಮೊದಲ ಮುಖ್ಯ ಪಟ್ಟಿಯಲ್ಲಿನ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತೆಯ ರಕ್ಷಣೆಯನ್ನು ಗಮನದಲ್ಲಿರಿಸಿ ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ಮತ್ತು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957 ಅನ್ನು ಅನುಸರಿಸಿ ಪರಸ್ಪರ ಜೇಷ್ಠತೆಯನ್ನು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಗ್ರಾಅಪ 374 ಗ್ರಾಪಂಕಾ 2013, ದಿನಾಂಕ:21-02-2014 ರಲ್ಲಿ ಮರು ನಿಗಧಿಪಡಿಸಲಾಗಿದೆ. |

| | | |
|---|---|---|
| (ಇ) | ಪಿ.ಡಿ.ಓ. ಹುದ್ದೆಯಿಂದ ಸಹಾಯಕ ನಿರ್ದೇಶಕ ಹುದ್ದೆಗೆ ಬಡ್ತಿ ನೀಡಲಿರುವ ಮಾನದಂಡಗಳು ಯಾವುವು? (ವಿವರ ನೀಡುವುದು) | ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯಿಂದ ಸಹಾಯಕ ನಿರ್ದೇಶಕ ಹುದ್ದೆಗೆ ಮುಂಬಡ್ತಿ ನೀಡುವಾಗ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ.<br>1. ಸಹಾಯಕ ನಿರ್ದೇಶಕ ಹುದ್ದೆಗಳು ಮುಂಬಡ್ತಿಗೆ ಖಾಲಿ ಇರಬೇಕು.<br>2. ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ ಒಟ್ಟಾರೆ 5 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರಬೇಕು. ಪರಂತು ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 5 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ಅರ್ಹ ವ್ಯಕ್ತಿಗಳು ಲಭ್ಯವಿಲ್ಲದಿದ್ದಲ್ಲಿ ಪಕ್ಷದಲ್ಲಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರಬೇಕು.<br>3. ಚಾಲ್ತಿಯಲ್ಲಿರುವ/ಅನುಷ್ಠಾನ ಮಾಡಲು ಅರ್ಹವಾಗಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯಲ್ಲಿ ಸೇವಾ ಹಿರಿತನ ಹೊಂದಿರುವವರನ್ನು ಖಾಲಿ ಇರುವ ಸಹಾಯಕ ನಿರ್ದೇಶಕ ಹುದ್ದೆಗಳ ಲಭ್ಯತೆಗೆ ಅನುಗುಣವಾಗಿ ಮುಂಬಡ್ತಿಗೆ ಪರಿಶೀಲಿಸಲಾಗುತ್ತದೆ.<br>4. ಅಂತಹ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಹಾಯಕ ನಿರ್ದೇಶಕ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗಿರತಕ್ಕದ್ದು, ಪರೀಕ್ಷಾರ್ಥ ಪೂರ್ವ ಅವಧಿ ಘೋಷಣೆಯಾಗಿರಬೇಕು.<br>5. ಇಲಾಖಾ ಮುಂಬಡ್ತಿ ಸಮಿತಿ ಸಭೆಗೆ ಮಂಡಿಸುವ ಅರ್ಹ ಪಂಚಾಯತ್ ಅಭಿವೃದ್ಧಿ ಅಧಿಕಾರಿಯು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಿಕಟ ಪೂರ್ವದ 5 ವರ್ಷಗಳ ಕಾರ್ಯನಿರ್ವಾಹಣ ವರದಿಗಳು ಲಭ್ಯವಿರತಕ್ಕದ್ದು, ಅವುಗಳಲ್ಲಿ ಯಾವುದೇ ಪ್ರತಿಕೂಲ ಷರಾ ಇರತಕ್ಕದಲ್ಲ.<br>6. ಮೇಲಿನ ಇತರೆ ಎಲ್ಲಾ ಅರ್ಹತೆಗಳನ್ನು ಹೊಂದಿದ್ದು ಇಲಾಖಾ ವಿಚಾರಣೆ/ಕ್ರಿಮಿನಲ್ ಮೊಕದ್ದಮೆ ಬಾಕಿ ಇರುವ ಪ್ರಕರಣಗಳು/ಅಮಾನತ್ತಿನಲ್ಲಿರುವ ಪ್ರಕರಣಗಳಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಕೈಗೊಳ್ಳುವ ನಿರ್ಣಯದಂತೆ ಮುಚ್ಚಿದ ಲಕೋಟೆ ಪದ್ಧತಿಯನ್ನು ಅನುಸರಿಸಲಾಗುವುದು. ಸದರಿ ಪ್ರಕರಣಗಳಲ್ಲಿ ಆರೋಪ ಮುಕ್ತಗೊಂಡಲ್ಲಿ ಮುಚ್ಚಿದ ಲಕೋಟೆ ತೆರೆದು ಮುಂಬಡ್ತಿ ನೀಡುವ ಮಾನದಂಡ ಅನುಸರಿಸಲಾಗುತ್ತದೆ. |

ಸಂಖ್ಯೆ: ಗ್ರಾಅಪ 363 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ